ಕೇಂದ್ರೀಯ ಹತ್ತಿ ಸಂಶೋಧನಾ ಸಂಸ್ಥೆ, ನಾಗಪುರ, ಮಹಾರಾಷ್ಟ್ರ

[ಭಾರತೀಯ ಕೃಷಿ ಅನುಸಂಧಾನ ಪರಿಷತ್ತು (ಭಾ. ಕೃ. ಅ. ಪ.), ಕೃಷಿ ಮಂತ್ರಾಲಯ, ಭಾರತ ಸರ್ಕಾರ]

ಹತ್ತಿ ಬೆಳೆಯ ಸಾಪ್ತಾಹಿಕ ಸಲಹೆ, 12 ರಿಂದ 18 ನವೆಂಬರ್ 2026 ರ ಅವಧಿಗೆ

"ಈ ಸಲಹೆಯು ರಾಜ್ಯ ಕೃಷಿ ವಿಶ್ವವಿದ್ಯಾನಿಲಯಗಳಿಂದ ಸ್ವೀಕರಿಸಿದ ಮಾಹಿತಿಯನ್ನು ಆಧರಿಸಿದೆ"

ಅ. ಮಣ್ಣಿನ ಆರೋಗ್ಯ, ಪೋಷಣೆ, ಹಾಗೂ ಕೀಟ ಮತ್ತು ರೋಗ ನಿರ್ವಹಣೆಯ ಕುರಿತಾದ ಸಾಮಾನ್ಯ ಸಲಹೆ

ಹೆಚ್ಚಿನ ಹತ್ತಿ ಇಳುವರಿಯು ಸಮತೋಲಿತ ಮಣ್ಣಿನ ಪೋಷಣೆ, ನೀರಿನ ನಿರ್ವಹಣೆ ಮತ್ತು ಪೂರ್ವಭಾವಿ ನಿರೀಕ್ಷಣೆ ಆಧಾರಿತ ಕೀಟ ಮತ್ತು ರೋಗ ನಿರ್ವಹಣೆಯನ್ನು ಅವಲಂಬಿಸಿದೆ. ಸಂಪೂರ್ಣ ಮತ್ತು ಸಮಗ್ರ ಬೆಳೆ ನಿರ್ವಹಣಾ ಯೋಜನೆಯನ್ನು ಅನುಷ್ಠಾನಗೊಳಿಸುವುದರಿಂದ ಸರಿಯಾದ ಬೆಳವಣಿಗೆ ಮತ್ತು ಚೈತನ್ಯವನ್ನು ಖಚಿತಪಡಿಸುವುದರೊಂದಿಗೆ ಬೇಸಾಯ ವೆಚ್ಚವನ್ನು ಕಡಿಮೆ ಮಾಡುತ್ತದೆ. ಇದಲ್ಲದೇ, ಬೆಳೆಯನ್ನು ವಿನಾಶಕಾರಿ ಕೀಟ ಮತ್ತು ರೋಗ ಹಾನಿಯಿಂದ ರಕ್ಷಿಸುತ್ತದೆ.

ಮಣ್ಣಿನ ಆರೋಗ್ಯ ಮತ್ತು ಪೋಷಕಾಂಶ ನಿರ್ವಹಣೆ (INM)

- **ಸೂಕ್ಷ್ಮ ಪೋಷಕಾಂಶಗಳನ್ನು ಅತ್ಯುತ್ತಮವಾಗಿಸಿ:** ಬೆಳೆ ತಿರುಗುವಿಕೆ, ಸಾವಯವ ಗೊಬ್ಬರ ಮತ್ತು ಹೊದಿಕೆ ಬೆಳೆಗಳಿಗೆ ಆದ್ಯತೆ ನೀಡುವ ಮೂಲಕ ಮತ್ತು ಬಿತ್ತನೆ ಪೂರ್ವ ಮಣ್ಣಿನ ಪರೀಕ್ಷೆಯ ಆಧಾರದ ಮೇಲೆ ತರ್ಕಬದ್ಧ ರಾಸಾಯನಿಕ ಗೊಬ್ಬರವನ್ನು ಬಳಸುವ ಮೂಲಕ ಮಣ್ಣಿನ ಆರೋಗ್ಯವನ್ನು ಸುಧಾರಿಸಿ.

- **ಸೂಕ್ಷ್ಮ ಪೋಷಕಾಂಶಗಳನ್ನು ಅನ್ವಯಿಸಿ:** ಅಗತ್ಯವಿರುವಂತೆ ಉದ್ದೇಶಿತ ಸಿಂಪಡಣೆಗಳ ಮೂಲಕ ದ್ವಿತೀಯ ಮತ್ತು ಸೂಕ್ಷ್ಮ ಪೋಷಕಾಂಶಗಳ ಕೊರತೆಗಳನ್ನು (ಸತು, ಬೋರಾನ್, ಮ್ಯಾಂಗನೀಸ್ ಮತ್ತು ಮೆಗ್ನೀಸಿಯಮ್‌ನಂತಹ) ಪೂರ್ವಭಾವಿಯಾಗಿ ಪರಿಹರಿಸಿ.

ರೋಗ ನಿರ್ವಹಣೆ (IDM)

- **ರೋಗ ತಡೆಗಟ್ಟುವ ಪದ್ಧತಿಗಳನ್ನು ನಿಯೋಜಿಸಿ:** ಮಣ್ಣಿನಿಂದ ಹರಡುವ ಮತ್ತು ಎಲೆಗಳಿಂದ ಹರಡುವ ರೋಗಕಾರಕಗಳ ನಿರ್ವಹಣೆಯನ್ನು ಸಮಗ್ರ ಕೃಷಿ ಪದ್ಧತಿಗಳ ಮೂಲಕ ಸಾಧಿಸಬೇಕು, ಇದರಲ್ಲಿ ಸರಿಯಾದ ಕ್ಷೇತ್ರ ನೈರ್ಮಲ್ಯ, ಜೈವಿಕ ಕೀಟನಾಶಕಗಳು ಮತ್ತು ಜೈವಿಕ ಗೊಬ್ಬರಗಳನ್ನು ಬೀಜ ಮತ್ತು ಮಣ್ಣಿನ ಉಪಚಾರಗಳಾಗಿ ಅನ್ವಯಿಸುವುದು, ಸಸ್ಯ ಆರೋಗ್ಯವನ್ನು ಹೆಚ್ಚಿಸಲು ಮತ್ತು ರೋಗದ ಸಂಭವವನ್ನು ನಿಗ್ರಹಿಸಲು ಸಹಾಯ ಮಾಡುತ್ತದೆ.
- **ಏಕಾಏಕಿ ರೋಗ ಪ್ರಸಾರ ನಿಯಂತ್ರಣ:** ಹೆಚ್ಚಿನ ಆರ್ದ್ರತೆಯ ಅವಧಿಯಲ್ಲಿ ನಿಯಮಿತ ಕ್ಷೇತ್ರ ಮೇಲ್ವಿಚಾರಣೆಯನ್ನು ಕೈಗೊಳ್ಳಬೇಕು ಮತ್ತು ಚಾಲ್ತಿಯಲ್ಲಿರುವ ಪರಿಸರ ಪರಿಸ್ಥಿತಿಗಳು ತ್ವರಿತ ರೋಗ ಬೆಳವಣಿಗೆ ಮತ್ತು ಹರಡುವಿಕೆಗೆ ಅನುಕೂಲಕರವಾದಾಗ ಮಾತ್ರ ಶಿಫಾರಸು ಮಾಡಲಾದ ಶಿಲೀಂಧ್ರನಾಶಕಗಳನ್ನು ವಿವೇಚನೆಯಿಂದ ಅನ್ವಯಿಸಬೇಕು.

ಸಮಗ್ರ ಕೀಟ ನಿರ್ವಹಣೆ (IPM)

- ಕ್ಷೇತ್ರ ಶೋಧನೆ ನಡೆಸುವುದು: ಕಾಯಿಕೊರಕಗಳ ಜೊತೆಗೆ ರಸ ಹೀರುವ ಕೀಟಗಳನ್ನು (ಥ್ರಿಪ್ಸ್ ನುಸಿ , ಹೇನು, ಜಿಗಿ ಹುಳುಗಳು, ಮತ್ತು ಜೇಡ ಹುಳಗಳು) ನಿರೀಕ್ಷಣೆ ಮಾಡಲು ವಾರಕ್ಕೊಮ್ಮೆ ಕ್ಷೇತ್ರ ಶೋಧನೆ ಮಾಡಿ.
- ಜಿಗುಟು ಬಲೆ ಮತ್ತು ಜೈವಿಕ ಕೀಟನಾಶಕಗಳನ್ನು ಬಳಸಿ: ವಯಸ್ಕ ಪತಂಗಗಳ ಹಾರಾಟವನ್ನು ಪತ್ತೆಹಚ್ಚಲು ಹಾಗೂ ಮೊಟ್ಟೆ ಇಡುವ ಚಕ್ರಗಳನ್ನು ಊಹಿಸಲು ಋತುವಿನ ಆರಂಭದಲ್ಲಿ ಲಿಂಗಾಕರ್ಷಕ ಬಲೆಗಳನ್ನು ನೆಡಬೇಕು. ಪ್ರಾಥಮಿಕ ಪ್ರತಿಕ್ರಿಯೆಯಾಗಿ ಸಾವಯವ, ನೈಸರ್ಗಿಕ ಅಥವಾ ಸಸ್ಯ ಆಧಾರಿತ ಕೀಟನಾಶಕಗಳನ್ನು ಸಿಂಪಡಿಸಬೇಕು.
- ನೈಸರ್ಗಿಕ ಮಿತ್ರಕೀಟಗಳನ್ನು ಸಂರಕ್ಷಿಸಿ: ವ್ಯಾಪಕ ವ್ಯಾಪ್ತಿಯ ರಾಸಾಯನಿಕಗಳಿಗಿಂತ ನಿರ್ದಿಷ್ಟ ಕೀಟನಾಶಕಗಳನ್ನು ಆರಿಸುವ ಮೂಲಕ ಮಿತ್ರ ಕೀಟಗಳ ಸಂರಕ್ಷಣೆ ಮಾಡಬೇಕು.
- ರಾಸಾಯನಿಕ ಬಳಕೆ ನಿರ್ಬಂಧಿಸಿ: ಕೀಟಗಳ ಸಂಖ್ಯೆಯು ಆರ್ಥಿಕ ಗರಿಷ್ಠ ಮಿತಿಯನ್ನು ತಲುಪಿದಾಗ ಮಾತ್ರ, ಲೇಬಲ್-ಶಿಫಾರಸು ಮಾಡಿದ ರಾಸಾಯನಿಕ ಕೀಟನಾಶಕಗಳನ್ನು ಕೊನೆಯ ಉಪಾಯವಾಗಿ ಬಳಸಬೇಕು.



ಬ. ನಿರ್ದಿಷ್ಟ ಸ್ಥಳಕ್ಕೆ ಸಂಬಂಧಿಸಿದ ಸಲಹೆ

ಕರ್ನಾಟಕ	ಕಳೆದ ವಾರದಲ್ಲಿ ಬಿದ್ದ ಮಳೆಯ ವಿವರ (ಮಿ.ಮೀ)						IMDಯ ಪ್ರಕಾರ ಮಳೆಯ ಮುನ್ಸೂಚನೆ (ಮಿ.ಮೀ)					
ತಿಂಗಳು	ನವೆಂಬರ್											
ದಿನಾಂಕ	03	04	05	06	07	08	09	11	12	13	14	15
ಧಾರವಾಡ	0	0	0	0	0	0	0	0	0	0	0	0.2
ಹಾವೇರಿ	0	0	0	0	0	0	0	0	0	0	0	0.4
ಮೈಸೂರು	0	1	0	0	0	0	0	0	0	0	0	2.6

ಮಳೆಯ ಮಾಹಿತಿಯ ಮಾದರಿ						ಮಳೆಯ ಮಾಹಿತಿಯ ಮೂಲ:
ಮಳೆಯ ಪ್ರಮಾಣ (ಮಿ.ಮೀ)	0.1-2.4	2.5-15.5	15.6-64.4	64.5-115.5	115.6-204.4	http://nwp.imd.gov.in/bias/dist_fcst.htm

ಬೆಳೆಯ ಸ್ಥಿತಿ:

ಧಾರವಾಡದಲ್ಲಿ, ಬೆಳೆಯು ಎರಡನೇ ಕೊಯ್ಲು ಹಂತದಲ್ಲಿದೆ. ಕೆಲವು ಹೊಲಗಳಲ್ಲಿ ಥ್ರಿಪ್ಸ್ (ನುಸಿ) ಬಾಧೆ ಕಡಿಮೆ ಪ್ರಮಾಣದಲ್ಲಿದೆ; ಎಲೆ ಜಿಗಿ ಹುಳುಗಳ ಬಾಧೆ ಕಡಿಮೆ ಅಥವಾ ಮಧ್ಯಮ ಪ್ರಮಾಣದಲ್ಲಿದೆ; ಸಸ್ಯ ಹೇನುಗಳು ಮಧ್ಯಮ ಪ್ರಮಾಣದಲ್ಲಿವೆ ಹಾಗೂ ಮಿರಿಡ್ ತಿಗಣೆಗಳ ಬಾಧೆ ಕಡಿಮೆ ಅಥವಾ ಮಧ್ಯಮ ಪ್ರಮಾಣದಲ್ಲಿದೆ. ಯಾವುದೇ ರೋಗದ ಲಕ್ಷಣಗಳು ಕಂಡುಬಂದಿಲ್ಲ.

ರಾಯಚೂರಿನಲ್ಲಿ, ಬಿತ್ತನೆ ಮಾಡಿದ ಬೆಳೆಯು 136 ದಿನಗಳ ಹಂತದಲ್ಲಿದ್ದು, ಕಾಯಿಗಳು ಪಕ್ವವಾಗುವ ಮತ್ತು ಹತ್ತಿ ಬಿಡಿಸುವ ಹಂತದಲ್ಲಿದೆ. ಈ ಹಂತದಲ್ಲಿ ಬೆಳೆಗಳ ನಡುವೆ ಕೈಗೊಳ್ಳಬೇಕಾದ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ರಸ ಹೀರುವ ಕೀಟಗಳ ನಿಯಂತ್ರಣಕ್ಕಾಗಿ ಕೀಟನಾಶಕಗಳನ್ನು ಸಿಂಪಡಿಸಲಾಗಿದೆ. ಕಳೆಗಳು, ಕೀಟಗಳು ಮತ್ತು ರೋಗಗಳು ವಿವಿಧ ಪ್ರಮಾಣಗಳಲ್ಲಿ ಕಂಡುಬಂದಿವೆ. ಬೆಳೆ ಸಂರಕ್ಷಣೆಗೆ ಶಿಫಾರಸು ಮಾಡಲಾದ ಪದ್ಧತಿಗಳನ್ನು ಅನುಸರಿಸಿ, ಕಂಡುಬಂದಿರುವ ಸಮಸ್ಯೆಗಳಿಗೆ ಅನುಗುಣವಾಗಿ ಮತ್ತು ಅಗತ್ಯಕ್ಕೆ ತಕ್ಕಂತೆ ಸೂಕ್ತ ಸಮಯದಲ್ಲಿ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳುವಂತೆ ರೈತರಿಗೆ ಸಲಹೆ ನೀಡಲಾಗಿದೆ.

ಚಾಮರಾಜನಗರದಲ್ಲಿ ಬೆಳೆಯ ಅವಧಿ ಮುಗಿದಿದ್ದು, ಅಂತಿಮ ಹಂತದ ಹತ್ತಿ ಬಿಡಿಸುವುದು ಕೂಡ ಪೂರ್ಣಗೊಂಡಿದೆ.

ಸಲಹೆ:

ಧಾರವಾಡದಲ್ಲಿ, ರೈತರು ನಿಯಮಿತವಾಗಿ ಸಂಪೂರ್ಣವಾಗಿ ತೆರೆದ, ಸ್ವಚ್ಛಗೊಳಿಸಿದ ಮತ್ತು ಒಣಗಿದ ಹತ್ತಿಯನ್ನು ಆರಿಸಲು, ಆರ್ದ್ರ ಪರಿಸ್ಥಿತಿಗಳಲ್ಲಿ ಕೊಯ್ಲು ಮಾಡುವುದನ್ನು ತಪ್ಪಿಸಲು ಮತ್ತು ಬಿಡಿಸಿದ ಹತ್ತಿಯನ್ನು ಸ್ವಚ್ಛವಾದ, ಒಣ ಸ್ಥಳದಲ್ಲಿ ಸಂಗ್ರಹಿಸಲು ಸೂಚಿಸಲಾಗಿದೆ, ಇದು ನಾರಿನ ಗುಣಮಟ್ಟವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಸಮಯೋಚಿತ ಮತ್ತು ಎಚ್ಚರಿಕೆಯಿಂದ ಕೊಯ್ಲು ಮಾಡಿದ ನಂತರ ಗುಲಾಬಿ ಕಾಯಿ ಕೊರಕದ ಬಾಧೆ ಮತ್ತು ಇತರೇ ಕೀಟಗಳ ನಿಯಮಿತ ಪರಿವೀಕ್ಷಣೆ ಮಾಡಬೇಕು. ಬೆಳೆಯ ಸ್ಥಿತಿ, ಕಾಯಿ ಸಂಖ್ಯೆ ಮತ್ತು ಆರ್ಥಿಕ ಲಾಭಗಳನ್ನು ನಿರ್ಣಯಿಸಿದ ನಂತರ ಮಾತ್ರ ರಾಸಾಯನಿಕಗಳನ್ನು ಉಪಯೋಗಿಸಬೇಕು.



ರಾಯಚೂರಿನಲ್ಲಿ, ರೈತರು ಸಂಪೂರ್ಣವಾಗಿ ತೆರೆದ, ಶುಚಿಗೊಳಿಸಿದ ಮತ್ತು ಒಣಗಿದ ಹತ್ತಿಯನ್ನು ನಿಯಮಿತ ಅಂತರದಲ್ಲಿ ಬಿಡಿಸಬೇಕು, ಆರ್ದ್ರ ಪರಿಸ್ಥಿತಿಗಳಲ್ಲಿ ಹತ್ತಿ ಬಿಡಿಸುವುದನ್ನು ನಿಲ್ಲಿಸಬೇಕು ಮತ್ತು ಕೊಯ್ಲು ಮಾಡಿದ ಹತ್ತಿಯಲ್ಲಿ ನಾರಿನ ಗುಣಮಟ್ಟವನ್ನು ಕಾಪಾಡಿಕೊಳ್ಳಲು ಸ್ವಚ್ಛ, ಶುಷ್ಕ ಸ್ಥಳದಲ್ಲಿ ಸಂಗ್ರಹಿಸಬೇಕು. ಸಕಾಲಿಕ ಮತ್ತು ಎಚ್ಚರಿಕೆಯಿಂದ ಕೊಯ್ಲು ಮಾಡಿದ ನಂತರ ಗುಲಾಬಿ ಕಾಯಿ ಹುಳುಗಳ ಬಾಧೆ ಮತ್ತು ಇತರೇ ಕೀಟಗಳ ನಿಯಮಿತ ಪರಿವೀಕ್ಷಣೆ ಮಾಡಬೇಕು. ಬೆಳೆಯ ಸ್ಥಿತಿ, ಕಾಯಿಗಳ ಸಂಖ್ಯೆ ಮತ್ತು ಆರ್ಥಿಕ ಲಾಭಗಳನ್ನು ನಿರ್ಣಯಿಸಿದ ನಂತರವೇ ರಾಸಾಯನಿಕಗಳನ್ನು ಉಪಯೋಗಿಸಬೇಕು.

ಚಾಮರಾಜನಗರದಲ್ಲಿ ಬೆಳೆಯ ಅವಧಿ ಮುಗಿದಿದ್ದು, ಯಾವುದೇ ರಾಸಾಯನಿಕ ಸಿಂಪಡಣೆಯ ಅಗತ್ಯವಿಲ್ಲ.

ಭಾ. ಕೃ. ಅ. ಪ. – ಕೇಂದ್ರೀಯ ಹತ್ತಿ ಸಂಶೋಧನಾ ಸಂಸ್ಥೆ, ನಾಗಪುರ

ಕನ್ನಡ ಅನುವಾದ

ಡಾ. ನೀಲಕಂಠ ಸ. ಹಿರೇಮನಿ

